ದಿನಾಂಕಃ17.01.2024 ರಂದು ಪಿ.ಡಬ್ಲ್ಯೂ-1 ರವರನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು. ಅವರು ತಮ್ಮ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಪಿ.ಡಬ್ಲ್ಯೂ-1 ಅವರ ಮುಖ್ಯ ವಿಚಾರಣೆಯಾಗಿ ಪರಿಗಣಿಸಲು ಕೋರಿದ್ದು ಅವರ ಕೋರಿಕೆಯನ್ನು ಮನ್ನಿಸಲಾಯಿತು.

ಮುಖ್ಯ ವಿಚಾರಣೆಃ ಶ್ರೀ ಎನ್ ಎಸ್ ವಕೀಲರಿಂದಃ

ನಾನು ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು ಅದರಲ್ಲಿರುವ ಅಂಶಗಳು ಸತ್ಯವಾಗಿರುತ್ತದೆ, ಅದಕ್ಕೆ ನಾನು ನನ್ನ ಸಹಿ ಮಾಡಿರುತ್ತೇನೆ.

1. ಅಡ್ಮೀಷನ್ ಎಕ್ಸ್ ಟ್ರಾಕ್ಟ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ1 ಎಂದು ಗುರುತಿಸಲಾಯಿತು.

2. ವ್ಯಾಸಂಗ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ 2 ಎಂದು ಗುರುತಿಸಲಾಯಿತು.

3. ನೋಟೀಸ್ ಅನ್ನು ಹಾಜರುಪಡಿಸಿದ್ದು ಅದನ್ನು ನಿಪಿ3 ಎಂದು ಗುರುತಿಸಲಾಯಿತು.

4. ಆರು ರಸೀದಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 4 ರಿಂದ 9 ಎಂದು ಗುರುತಿಸಲಾಯಿತು.

5. ಆರು ಅಂಚೆ ಸ್ವೀಕೃತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ 10 ರಿಂದ 15 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ವಕೀಲರು ಕಾಲಾವಾಕಾಶ ಕೋರಿದ್ದು ಕಾಲಾವಕಾಶ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಿರುತ್ತೇನೆ.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಒಪ್ಪಿರುತ್ತಾರೆ.

ಸಹಿ/-
(ಶ್ರೀಮತಿ ಸ್ನೇಹಾ ಎಂ.)
ಹೆಚ್ಚುವರಿ ವ್ಯವಹಾರ ನ್ಯಾಯಾಧೀಶರು,
ಮತ್ತು ಜೆಎಂಎಫ್ ಸಿ, ಮುಳಬಾಗಿಲು